ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಕಳೆದ 3 ವರ್ಷಗಳಲ್ಲಿ ಅಬಕಾರಿ ಪರವಾನಿಗೆಗಳ ಕುರಿತು

ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿ ಂದ ಚುನಾಯಿತರಾದವರು) :-

1231 (1426) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಿಂದ ಸರ್ಕಾರ ನೀಡಿರುವ ಅಬಕಾರಿ ಪರವಾನಗಿಗಳ ಸಂಖ್ಯೆ ಎಷ್ಟು ; ಕಳೆದ ಮೂರು ವರ್ಷಗಳಿಂದ ರಾಜ್ಯದ ಬೊಕ್ಕಸಕ್ಕೆ ಸಂದಾಯವಾದ ಒಟ್ಟು ಅಬಕಾರಿ ಆದಾಯವೆಷ್ಟು; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಅನಧಿಕೃತವಾಗಿ ಮದ್ಯ ಮಾರಾಟ ಮಾಡುವವರ ವಿರುದ್ಧ ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ;

(ಇ) ಮರು ನವೀಕರಣಗೊಳ್ಳದ ಅಬಕಾರಿ ಲೈಸೆನ್ಸ್ ಮೂಲಕವೇ ಇನ್ನೂ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಅಬಕಾರಿ ಪರವಾನಗಿ ಲೈಸೆನ್ಸ್ ಹೊಂದಿರುವ ವ್ಯಕ್ತಿ ಅದನ್ನು ಮತ್ತೊಬ್ಬನಿಗೆ ಲೀಸ್‌ಗೆ ಅಥವಾ ಬಾಡಿಗೆಗೆ ಅಥವಾ ಮಾರಾಟ ಮಾಡಲು ಇರುವ ಮಾನದಂಡಗಳೇನು ; ಹೀಗೆ ಮಾಡಲು ಸಾಧ್ಯವಿಲ್ಲದಿದ್ದರೆ, ಇದರ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಮಾಹಿತಿ ನೀಡುವುದು)